# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1327(1599)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಸಂಚಾರಿ ನಿಯಮ ಪಾಲನೆಯಾಗದೇ ರಾಜ್ಯದಲ್ಲಿ ಅನಾಹುತ ಸಂಭವಿಸುತ್ತಿರುವ ಬಗ್ಗೆ

(ಅ) ರಾಜ್ಯದಲ್ಲಿ ವಾಹನ ಸವಾರರು ಸಂಚಾರಿ ನಿಯಮ ಪಾಲಿಸದೇ ರಸ್ತೆಯಲ್ಲಿ ದಿನನಿತ್ಯ ಅನಾಹುತಗಳು, ಸಾವುನೋವುಗಳು ಸಂಭವಿಸುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ರಸ್ತೆಯಲ್ಲಾಗುತ್ತಿರುವ ಅವಘಡಗಳನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು; ರೂಪಿಸಿರುವ ಕಠಿಣ ಸಂಚಾರಿ ನಿಯಮಗಳೇನು; ಸದರಿ ನಿಯಮಗಳು ಕಟ್ಟುನಿಟ್ಟಾಗಿ ಯಾವಾಗ ಜಾರಿಗೆ ಬರುತ್ತವೆ;

(ಇ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ರಸ್ತೆ ಅಪಘಾತಗಳಿಂದ ಉಂಟಾಗಿರುವ ನಷ್ಟವನ್ನು ಅಂದಾಜಿಸಲಾಗಿದೆಯೇ; (ವಿವರ ನೀಡುವುದು)

(ಈ) ಸಂಚಾರಿ ನಿಯಮ ಉಲ್ಲಂಘಿಸಿದ ವಾಹನ ಸವಾರರ ವಿರುದ್ಧ ಕಠಿಣ ಕ್ರಮ ಹಾಗೂ ಶುಲ್ಕ ವಿಧಿಸುವ ಬದಲು ಅವರೊಂದಿಗೆ ಪೊಲೀಸರು ಚೌಕಾಸಿಗೆ ಇಳಿದು ಲಂಚ ಪಡೆದು ಸಂಚಾರಿ ನಿಯಮ ಉಲ್ಲಂಘಿಸುತ್ತಿರುವುದು ನಿಜವೇ;

(ಉ) ಹಾಗಾದರೆ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)